ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com

ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಸಂಖ್ಯೆ: ಕವಿಪ್ರನಿನಿ/ಬಿ23/70029/17-18.

ದಿನಾಂಕ : 17 FEB 2020

## ಸುತ್ತೋಲೆ

ವಿಷಯ: ಕಾರ್ಮಿಕ ಪರಿಹಾರ ಕಾಯ್ದೆಯಡಿಯಲ್ಲಿ ಪರಿಹಾರ ಧನವನ್ನು ಪಾವತಿಸಲು ಪರಿಗಣಿಸಬೇಕಾದ ಕನಿಷ್ಠ ವೇತನದ ಬಗ್ಗೆ.

ಉಲ್ಲೇಖ: 1. ಈ ಕಚೇರಿ ಇದೇ ಸಮಸಂಖ್ಯೆಯ ಸುತೋಲೆ ಸಂಖ್ಯೆ ದಿನಾಂಕ: 22.12.2018.
2. ಮಾನ್ಯ ಕೇಂದ್ರ ಸರ್ಕಾರವು ದಿನಾಂಕ: 03.01.2020 ರಂದು ಹೊರಡಿಸಿರುವ ಗೆಜೆಟ್ ಪ್ರತಿ.

********

ನಿಗಮದಲ್ಲಿನ ನೌಕರರು/ಗುತ್ತಿಗೆ ಕಾರ್ಮಿಕರು(ಹೊರಗುತ್ತಿಗೆ ಕಾರ್ಮಿಕರನ್ನು ಹೊರತುಪಡಿಸಿ) ಕರ್ತವ್ಯ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ಅಪಘಾತಕ್ಕೀಡಾಗಿ ನಿಧನ ಹೊಂದಿದರೆ ಅಥವಾ ಅಶಕ್ತತೆ ಉಂಟಾದಲ್ಲಿ ಅಂತಹ ನೌಕರರ/ಗುತ್ತಿಗೆ ಕಾರ್ಮಿಕರು ಅಥವಾ ಅವರ ಅರ್ಹ ಅವಲಂಬಿತರಿಗೆ ಕಾರ್ಮಿಕ ಪರಿಹಾರ ಕಾಯ್ದೆ-1923 ರ ಅಡಿಯಲ್ಲಿ ಪರಿಹಾರ ಧನವನ್ನು ಪಾವತಿಸುವ ಅನುಸರಿಸಬೇಕಾದ ನಿಯಮಗಳ ಬಗ್ಗೆ ದಿನಾಂಕ: 22.12.2018 ರಂದು ಉಲ್ಲೇಖಿತ ಪತ್ರ-1ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.

ಮಾನ್ಯ ಕೇಂದ್ರ ಸರ್ಕಾರವು ಕಾರ್ಮಿಕ ಪರಿಹಾರ ಕಾಯ್ದೆಯಡಿಯಲ್ಲಿ ಪರಿಹಾರ ಮೊತ್ತವನ್ನು ಲೆಕ್ಕೀಕರಿಸುವಾಗ ಪರಿಗಣಿಸಬೇಕಾದ ಮಾಸಿಕ ವೇತನವನ್ನು ದಿನಾಂಕ: 03.01.2020 ರಿಂದ ಜಾರಿಗೆ ಬರುವಂತೆ ರೂ 15,000/- ಎಂದು ಪರಿಗಣಿಸಲು ತಿಳಿಸಿರುತ್ತಾರೆ.

ಆದ್ದರಿಂದ ಕಾರ್ಮಿಕ ಪರಿಹಾರ ಕಾಯ್ದೆಯಡಿಯಲ್ಲಿ ಪರಿಹಾರ ಮೊತ್ತವನ್ನು ಲೆಕ್ಕೀಕರಿಸುವಾಗ ಪರಿಗಣಿಸಬೇಕಾದ ಮಾಸಿಕ ವೇತನವನ್ನು ಉಲ್ಲೇಖಿತ ಪತ್ರ-1ರಲ್ಲಿ ತಿಳಿಸಿರುವ ರೂ.8000/-ರ ಬದಲಾಗಿ ರೂ.15,000/-ನ್ನು ಪರಿಗಣಿಸಿ (ದಿನಾಂಕ: 03.01.2020 ರಿಂದ ಜಾರಿಗೆ ಬರುವಂತೆ) ಪರಿಹಾರ ಮೊತ್ತವನ್ನು ಪಾವತಿಸುವಂತೆ ತಿಳಿಸಲಾಗಿದೆ. ಉಳಿದಂತೆ ಉಲ್ಲೇಖಿತ-1ರ ಪತ್ರದಲ್ಲಿನ ನಿಯಮಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ)
ಕವಿಪ್ರನಿನಿ.

ಪ್ರತಿಯನ್ನು ಮಾಹಿತಿಗಾಗಿ:

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು.
4. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com/eprasarana ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ**

1. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿ, ಕವಿಪ್ರನಿನಿ.
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ಉಪಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.
3. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ನೌಕರರು, ಕವಿಪ್ರನಿನಿ.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು ಕವಿಪ್ರನಿನಿ ನೌಕರರ ಸಂಘ (ನೋಂದಣಿ ಸಂಖ್ಯೆ:659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.